ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/157/ರಾ.ಮ.ದಿನ/2020-21 ದಿನಾಂಕ: 07.03.2023

## ಸುತ್ತೋಲೆ

ವಿಷಯ: ರಾಜ್ಯದ ಎಲ್ಲಾ ಕಾಲೇಜುಗಳಲ್ಲಿ ಮತದಾರ ಜಾಗೃತ ಸಂಘ (Voter Awareness Forum) ರಚಿಸುವ ಕುರಿತು.

ಉಲ್ಲೇಖ: ಸರ್ಕಾರದ ಉಪ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, (ಆಡಳಿತ ಸುಧಾರಣೆ), ರವರ ಅನಧಿಕೃತ ಟಿಪ್ಪಣಿ ಸಂಖ್ಯೆ:ಸಿಆಸುಇ (ಆಸು) 05 ಸ್ವೀಮರ 2023 ದಿನಾಂಕ:12.01.2023.

*******

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ, ಚುನಾವಣಾ ಜಾಗೃತಿಯನ್ನು ಪರಿಣಾಮಕಾರಿಯಾಗಿ ಮೂಡಿಸುವ ನಿಟ್ಟಿನಲ್ಲಿ ಮತದಾರ ಜಾಗೃತಿ ಸಂಘಗಳು (Voter Awareness Forum) ಬಹು ಮುಖ್ಯ ಪಾತ್ರವಹಿಸುತ್ತವೆ. ಮುಂಬರುವ 2023 ರ ಕರ್ನಾಟಕ ಸಾರ್ವತ್ರಿಕ ಚುನಾವಣೆ ಸಂಬಂಧ ಮತದಾರ ಜಾಗೃತಿ ಸಂಘಗಳನ್ನು ಎಲ್ಲಾ ಕಾಲೇಜುಗಳಲ್ಲಿ ಕಡ್ಡಾಯವಾಗಿ ಸ್ಥಾಪಿಸುವಂತೆ ಉಲ್ಲೇಖಿತ ಸರ್ಕಾರದ ಅನಧಿಕೃತ ಟಿಪ್ಪಣಿಯಲ್ಲಿ ಸೂಚಿಸಲಾಗಿರುತ್ತದೆ.

ತತ್ಸಂಬಂಧವಾಗಿ 2023ರ ಕರ್ನಾಟಕ ಸಾರ್ವತ್ರಿಕ ಚುನಾವಣೆ ಸಂಬಂಧ ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳು **ಮತದಾರ ಜಾಗೃತಿ ಸಂಘ**ಗಳನ್ನು ಕಡ್ಡಾಯವಾಗಿ ಸ್ಥಾಪಿಸಲು ಕ್ರಮಗೊಳ್ಳುವಂತೆ ಸೂಚಿಸಲಾಗಿದೆ.

**(ಟಿಪ್ಪಣಿ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)**

**ಕಾಲೇಜು ಶಿಕ್ಷಣ ನಿರ್ದೇಶಕರು**

**ಇವರಿಗೆ:**

1. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

**ಪ್ರತಿಯನ್ನು:**

1. ಸರ್ಕಾರದ ಅಪರ ಮುಖ್ಯ ಚುನಾವಣಾಧಿಕಾರಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ, ಬೆಂಗಳೂರು – 560 001.
2. ಕಛೇರಿ ಪ್ರತಿ.